# Akashvani : Bangalore
# Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

## 11.06.2024 / 18.40 hrs

<u>ಮುಖ್ಯಾಂಶಗಳು</u>

೧. ದೆಹಲಿಯಲ್ಲಿ ಅಧಿಕಾರಿಗಳೊಂದಿಗೆ ಕೇಂದ್ರ ಉಕ್ಕು ಮತ್ತು ಕೈಗಾರಿಕಾ ಸಚಿವ ಕುಮಾರಸ್ವಾಮಿ ಸಭೆ ; ಭದ್ರಾವತಿ ಉಕ್ಕು ಕಾರ್ಖಾನೆ ಪುನಶ್ಚೇತನದ ಬಗ್ಗೆ ಚರ್ಚೆ

೨. ಕೇಂದ್ರ ಸಚಿವರಾಗಿ ದೆಹಲಿಯಲ್ಲಿ ಇಂದು ಪ್ರಲ್ಹಾದ್ ಜೋಶಿ, ವಿ. ಸೋಮಣ್ಣ ಅಧಿಕಾರ ಸ್ವೀಕಾರ

೩. ಅಬಕಾರಿ ಪರವಾನಗಿ ನವೀಕರಣಕ್ಕೆ ಸನ್ನದ್ದುದಾರರಿಗೆ ಕಿರುಕುಳ ನೀಡಬಾರದು - ಮುಖ್ಯಮಂತ್ರಿ ಸಿದ್ಧರಾಮಯ್ಯ ಸೂಚನೆ

೪. ಸರ್ಕಾರಿ ಆಸ್ತಿಗಳ ಸಂರಕ್ಷಣೆಗೆ ಲ್ಯಾಂಡ್ ಬೀಟ್ ವ್ಯವಸ್ಥೆ ಜಾರಿಗೊಳಿಸಲು ಸರ್ಕಾರ ನಿರ್ಧಾರ

೫. ಶಕ್ತಿ ಯೋಜನೆ ಹಿನ್ನಲೆ ; ಕೆಎಸ್‌ಆರ್‌ಟಿಸಿ ದೈನಂದಿನ ಸರಾಸರಿ ಆದಾಯದಲ್ಲಿ ಭಾರಿ ಏರಿಕೆ

**<><*<><>*><>**

ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಎಚ್.ಡಿ. ಕುಮಾರಸ್ವಾಮಿ ದೆಹಲಿಯಲ್ಲಿಂದು ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಈ ವೇಳೆ ಕಬ್ಬಿಣ ಮತ್ತು ಉಕ್ಕಿನ ಕಾರ್ಖಾನೆ ಪುನಶ್ಚೇತನ, ಕುದುರೆಮುಖದಲ್ಲಿ ದೊರೆಯುತ್ತಿದ್ದ ಕಬ್ಬಿಣದ ಅದಿರು ಜಗತ್ತಿನಲ್ಲೇ ಶ್ರೇಷ್ಠ ಗುಣಮಟ್ಟದ ಅದಿರು ಎನ್ನುವುದನ್ನು ಅಧಿಕಾರಿಗಳು ಸಚಿವರ ಗಮನಕ್ಕೆ ತಂದರು. ಬೆಂಗಳೂರಿನಲ್ಲಿ ಉಕ್ಕು ಸಂಶೋಧನಾ ಕೇಂದ್ರ ಸ್ಥಾಪನೆ ಮಾಡುವ ಸಂಬಂಧ ಅಧಿಕಾರಿಗಳು ಸಚಿವರಿಗೆ ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಭದ್ರಾವತಿ ಕಬ್ಬಿಣ ಮತ್ತು ಉಕ್ಕು ಕಾರ್ಖಾನೆ ಪುನಶ್ಚೇತನದ ಬಗ್ಗೆಯೂ ಸಚಿವರು ಚರ್ಚೆ ನಡೆಸಿದ್ದಾರೆ.

**<><*<><>*><>**

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರದಲ್ಲಿ ೨ನೇ ಬಾರಿಗೆ ಸಂಪುಟ ದರ್ಜೆಯ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ ಕೇಂದ್ರ ಸಚಿವ ಪ್ರಲ್ಹಾದ್ ಜೋಷಿ ದೆಹಲಿಯಲ್ಲಿಂದು ಅಧಿಕಾರ ಸ್ವೀಕರಿಸಿದರು. ಆಹಾರ ಮತ್ತು ನಾಗರಿಕ ಪೂರೈಕೆ ಖಾತೆ, ಹೊಸ ಹಾಗೂ ನವೀಕರಿಸಬಹುದಾದ ಇಂಧನ ಖಾತೆ ಜವಾಬ್ದಾರಿ ಹೊತ್ತಿರುವ ಪ್ರಲ್ಹಾದ್ ಜೋಷಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಈ ವೇಳೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ದೇಶದ ಎಲ್ಲ ಜನರಿಗೆ ಆಹಾರ ಭದ್ರತೆ ಖಾತರಿಪಡಿಸಲು ಬದ್ಧರಾಗಿದ್ದೇವೆ ಎಂದು ತಿಳಿಸಿದರು. ಇನ್ನೊಂದೆಡೆ ರೈಲ್ವೆ ಖಾತೆ ರಾಜ್ಯ ಸಚಿವರಾಗಿ ವಿ. ಸೋಮಣ್ಣ ದೆಹಲಿಯಲ್ಲಿಂದು ಅಧಿಕಾರ ಸ್ವೀಕರಿಸಿದರು. ಈ ವೇಳೆ ಮಾತನಾಡಿದ ಅವರು, ಕಳೆದ ೧೦ ವರ್ಷಗಳಲ್ಲಿ ಪ್ರಧಾನಿ ಮೋದಿ ಅವರ ಸಮರ್ಥ ನಾಯಕತ್ವದಲ್ಲಿ ರೈಲ್ವೆ ಕ್ಷೇತ್ರ ಗಣನೀಯ ಪ್ರಗತಿ ಸಾಧಿಸಿದೆ. ಮೂರನೇ ಅವಧಿಯಲ್ಲೂ ಇದೇ ವೇಗ ಮುಂದುವರಿಯಲಿದೆ ಎಂದು ಸ್ಪಷ್ಟಪಡಿಸಿದರು.

**<><*<><>*><>**

ಅಬಕಾರಿ ಪರವಾನಗಿಗಳ ನವೀಕರಣಕ್ಕೆ ಸನ್ನದುದಾರರಿಗೆ ಕಿರುಕುಳ ನೀಡಬಾರದು ಎಂದು ಮುಖ್ಯಮಂತ್ರಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಿದ್ದಾರೆ. ಇಂದು ಅಬಕಾರಿ ಇಲಾಖೆಯ ಇಂದು ಅಬಕಾರಿ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು, ನೆರೆ ರಾಜ್ಯಗಳಿಂದ ರಾಜ್ಯಗಳಿಂದ ರಾಜ್ಯಕ್ಕೆ ಕಳ್ಳಸಾಗಾಣಿಕೆ ಮೂಲಕ ಬರುವ ಮದ್ಯವನ್ನು ತಡೆಗಟ್ಟಬೇಕು ಎಂದು ತಿಳಿಸಿದ್ದಾರೆ. ಎಂದು ತಿಳಿಸಿದ್ದಾರೆ. ಇಲಾಖೆಯ ತೆರಿಗೆ ಸಂಗ್ರಹ ಸಾಮರ್ಥ್ಯವನ್ನು ಆಧರಿಸಿಯೇ ನಿಗದಿ ಪಡಿಸುವ ಗುರಿ ಪಡಿಸುವ ಗುರಿ ತಲುಪಲು ಅಧಿಕಾರಿಗಳು ಗರಿಷ್ಠ ಪ್ರಯತ್ನ ಮಾಡಬೇಕು ಎಂದು ಸೂಚಿಸಿದ್ದಾರೆ. ಚುನಾವಣಾ

ಸೂಚಿಸಿದ್ದಾರೆ. ಚುನಾವಣಾ ನೀತಿ ಸಂಹಿತೆ ಕಾರಣದಿಂದ ತೆರಿಗೆ ಸಂಗ್ರಹ ಬೆಳವಣಿಗೆ ದರ ನಿರೀಕ್ಷಿತ ಮಟ್ಟ ನಿರೀಕ್ಷಿತ ಮಟ್ಟ ತಲುಪಿಲ್ಲ ಎಂಬ ಅಧಿಕಾರಿಗಳ ಹೇಳಿಕೆಗೆ ಪ್ರತಿಕ್ರಿಯಿಸಿ ಮುಂದಿನ ದಿನಗಳಲ್ಲಿ ಇದನ್ನು ಭರ್ತಿ ದಿನಗಳಲ್ಲಿ ಇದನ್ನು ಭರ್ತಿ ಮಾಡುವಂತೆ ಮುಖ್ಯಮಂತ್ರಿ ಸಲಹೆ ನೀಡಿದ್ದಾರೆ. ಅಧಿಕಾರಿ ಇಲಾಖೆಯಲ್ಲಿ ಇಲಾಖೆಯಲ್ಲಿ ಕಾನ್ಸ್‌ಟೇಬಲ್, ಸಬ್ ಇನ್ಸ್‌ಪೆಕ್ಟರ್‌ಗಳ ನೇಮಕಾತಿ ಹಾಗೂ ವಾಹನಗಳ ಅಗತ್ಯತೆ ಕುರಿತಂತೆ ಅಗತ್ಯತೆ ಕುರಿತಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ಅವರು ನಿರ್ದೇಶನ ನೀಡಿದ್ದಾರೆ. ಇದೇ ವೇಳೆ ಅಬಕಾರಿ ನೀಡಿದ್ದಾರೆ. ಇದೇ ವೇಳೆ ಅಬಕಾರಿ ಇಲಾಖೆಯ ವ್ಯವಹಾರಗಳನ್ನು ಸರಳಗೊಳಿಸುವ ನೂತನ ತಂತ್ರಾಂಶವನ್ನು ತಂತ್ರಾಂಶವನ್ನು ಮುಖ್ಯಮಂತ್ರಿ ಸಿದ್ಧರಾಮಯ್ಯ ಲೋಕಾರ್ಪಣೆಗೊಳಿಸಿದರು.

<><*<><>*><>

ರಾಜ್ಯದಲ್ಲಿ ಸರ್ಕಾರಿ ಜಾಗಗಳ ಸಂರಕ್ಷಣೆ ಹಾಗೂ ಒತ್ತುವರಿ ತೆರವು ಮಾಡುವ ನಿಟ್ಟಿನಲ್ಲಿ ಕಂದಾಯ ಇಲಾಖೆ ದೇಶದಲ್ಲಿಯೇ ನೂತನವಾಗಿ ಲ್ಯಾಂಡ್ ಬೀಟ್ ವ್ಯವಸ್ಥೆಯನ್ನು ಅಳವಡಿಸಿದೆ ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ತಿಳಿಸಿದ್ದಾರೆ. ದೊಡ್ಡಬಳ್ಳಾಪುರ ತಾಲೂಕಿನ ಮಧುರೆ ಹೋಬಳಿಯಲ್ಲಿ ಕಂದಾಯ ಅಧಿಕಾರಿಗಳೊಂದಿಗೆ ಲ್ಯಾಂಡ್ ಬೀಟ್ ಹಾಗೂ ಆಧಾರ್ ಸೀಡಿಂಗ್ ವ್ಯವಸ್ಥೆ ಪರಿಶೀಲಿಸಿ ಮಾತನಾಡಿದ ಅವರು, ಮೊಬೈಲ್ ಆಪ್ ಮೂಲಕ ಗ್ರಾಮಗಳ ಹಾಗೂ ಸರ್ವೆ ಸಂಖ್ಯೆಗಳ ಪ್ರಕಾರದಂತೆ ದಾಖಲೀಕರಣ ಮಾಡಲಾಗುತ್ತಿದೆ ಎಂದು ಹೇಳಿದ್ದಾರೆ. ಮಾರ್ಚ್ ತಿಂಗಳಿನಿಂದ ಇಲ್ಲಿಯವರೆಗೆ ೧೪ ಲಕ್ಷ ಸರ್ಕಾರಿ ಜಾಗಗಳನ್ನು ಅಪ್‌ಲೋಡ್ ಮಾಡಲಾಗಿದ್ದು, ಇದರಲ್ಲಿ ೫ ಲಕ್ಷ ೯ ಸಾವಿರ ಜಾಗಗಳನ್ನು ಮಹಜರು ಮಾಡಲಾಗಿದೆ ಎಂದು ತಿಳಿಸಿದ್ದಾರೆ.  ಸರ್ಕಾರಿ ಜಾಗಗಳ ಭದ್ರತೆ ತಳಹಂತದಿಂದಲೇ ಭದ್ರಪಡಿಸಬೇಕು ಎನ್ನುವ ಉದ್ದೇಶದಿಂದ ಈ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದೆ. ಯಾವ ಸರ್ವೆ ನಂಬರ್ ಒತ್ತುವರಿಯಾಗಿದೆ ಎಂದು ಗ್ರಾಮ ಲೆಕ್ಕಾಧಿಕಾರಿಗಳು ಸ್ಥಳಕ್ಕೇ ಹೋಗಿ ಪರಿಶೀಲಿಸಿ, ಜಿಪಿಎಸ್ ಮುಖಾಂತರ ವರದಿ ನೀಡಲಿದ್ದಾರೆ. ಪ್ರತಿ ಮೂರು ತಿಂಗಳಿಗೊಮ್ಮೆ ಈ ಪ್ರಕ್ರಿಯೆ ನಡೆಸಿ, ಜಿಲ್ಲಾಧಿಕಾರಿಗಳಿಗೆ ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ ಎಂದು ಅವರು ಹೇಳಿದ್ದಾರೆ.

<><*<><>*><>

ಶಕ್ತಿ ಯೋಜನೆ ಯಶಸ್ವಿಯಾಗಿ ಒಂದು ವರ್ಷ ಪೂರೈಸಿದ್ದು, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಸಂತಸ ವ್ಯಕ್ತಪಡಿಸಿದ್ದಾರೆ. ಶಕ್ತಿ ಯೋಜನೆಯಿಂದ ಸಾರಿಗೆ ಇಲಾಖೆ ಮತ್ತಷ್ಟು ಶಕ್ತಿಶಾಲಿಯಾಗಿದೆ ಎಂದು ಅವರು ಹೇಳಿದ್ದಾರೆ. ಬೆಂಗಳೂರಿನಲ್ಲಿ ಯೋಜನೆಗೆ ರಾಜ್ಯ ಸರ್ಕಾರ ಹಣ ಬಿಡುಗಡೆ ಮಾಡುತ್ತಿರುವುದರಿಂದ ಯೋಜನೆ ಅಬಾಧಿತ. ಯಾವುದೇ ನಿರ್ಬಂಧಗಳೂ ಇಲ್ಲದೆ ಶಕ್ತಿ ಯೋಜನೆಯ ಉದ್ದೇಶ ಸಾಕಾರಗೊಳಿಸಲು ಸರ್ಕಾರ ಬದ್ಧವಾಗಿದೆ ಎಂದು ಹೇಳಿದ್ದಾರೆ. ಈವರೆಗೆ ಸಾರಿಗೆ ವಾಹನಗಳಲ್ಲಿ ೨೨೫ ಕೋಟಿ ಮಹಿಳೆಯರು ಉಚಿತವಾಗಿ ಪ್ರಯಾಣಿಸಿದ್ದು, ಅದರ ಟಿಕೆಟ್ ಮೌಲ್ಯ ೫ ಸಾವಿರದ ೫೦೦ ಕೋಟಿ ರೂಪಾಯಿಯಾಗಿದೆ. ಮಹಿಳೆಯರು ಅತ್ಯಂತ ಸಂಭ್ರಮದಿಂದ ಬಸ್‌ನಲ್ಲಿ ಉಚಿತವಾಗಿ ಪ್ರಯಾಣಿಸುತ್ತಿದ್ದಾರೆ ಎಂದು ಹೇಳಿದರು. ಉಚಿತ ಪ್ರಯಾಣದ ಬಳಿಕ ಕೆಎಸ್‌ಆರ್‌ಟಿಸಿ ದೈನಂದಿನ ಸರಾಸರಿ ಆದಾಯದಲ್ಲಿ ಭಾರಿ ಏರಿಕೆ ಕಂಡಿದೆ. ೯ ಕೋಟಿ ೭ ಲಕ್ಷ ರೂಪಾಯಿ ಇದ್ದ ದೈನಂದಿನ ಆದಾಯ ಶಕ್ತಿ ಯೋಜನೆ ಬಳಿಕ ೧೩ ಕೋಟಿ ೯ ಲಕ್ಷ ರೂಪಾಯಿ ಆಗಿದೆ. ಅಲ್ಲದೇ ೨೫೦ ಕೋಟಿ ರೂಪಾಯಿ ಇದ್ದ ಮಾಸಿಕ ಸರಾಸರಿ ಆದಾಯ ಶಕ್ತಿ ಯೋಜನೆ ಬಳಿಕ ೪೦೦ ಕೋಟಿ ರೂಪಾಯಿ ಆಗಿದೆ. ಶಕ್ತಿ ಯೋಜನೆ ಮಹಿಳೆಯರಿಗೆ ಮಾತ್ರವಲ್ಲ, ಸಾರಿಗೆ ಸಂಸ್ಥೆಗಳಿಗೂ ವರದಾನವಾಗಿದೆ ಎಂದು ಸಚಿವರು ತಿಳಿಸಿದರು.

<><*<><>*><>

ಹುಬ್ಬಳ್ಳಿಯಲ್ಲಿ ನಡೆಯುತ್ತಿರುವ ಆರ್.ಎನ್.ಶೆಟ್ಟಿ ರಸ್ತೆ ಅಭಿವೃದ್ಧಿ ಕಾಮಗಾರಿ ಸ್ಥಳವನ್ನು ಶಾಸಕ ಮಹೇಶ ಟೆಂಗಿನಕಾಯಿ ಪರಿಶೀಲಿಸಿದರು. ರಸ್ತೆ ಕಾಮಗಾರಿ ವಿಳಂಬವಾಗುತ್ತಿದೆ ಎಂಬ ದೂರುಗಳ ಹಿನ್ನೆಲೆಯಲ್ಲಿ ಪರಿಶೀಲನೆ ನಡೆಸಿದ ಅವರು ವಿಳಂಬದ ಬಗ್ಗೆ ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಸೂಚನೆ ನೀಡಿದ ಅವರು ನಿಗದಿತ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ನಿರ್ದೇಶಿಸಿದರು.

<><*<><>*><>

ಜಿಲ್ಲೆಯ ಖಾಸಗಿ ಆಸ್ಪತ್ರೆ ಮತ್ತು ಕ್ಲಿನಿಕ್ ಗಳು ಕಡ್ಡಾಯವಾಗಿ  ಕೆಪಿಎಂಇ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಕಾಯ್ದೆ -೨೦೧೮ ರ ಅಡಿಯಲ್ಲಿ ನೋಂದಣಿ ಮಾಡಿಸಬೇಕು ಎಂದು ವಿಜಯಪುರ ಜಿಲ್ಲಾಧಿಕಾರಿ ಟಿ. ಭೂಬಾಲನ್ ಆದೇಶ ನೀಡಿದ್ದಾರೆ. ವಿಜಯಪುರದಲ್ಲಿ ಜರುಗಿದ ಕೆಪಿಎಂಇ ಜಿಲ್ಲಾ ನೋಂದಣಿ ಮತ್ತು ಕುಂದುಕೊರತೆ ನಿವಾರಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ ನಕಲಿ ವೈದ್ಯರ ಹಾವಳಿ ತಡೆಗಟ್ಟುವ ಉದ್ದೇಶದಿಂದ ಕಡ್ಡಾಯವಾಗಿ ಎಲ್ಲರಿಗೂ ಕಾಣುವ ರೀತಿಯಲ್ಲಿ ನೋಂದಣಿ ಫಲಕ ಅಳವಡಿಸಬೇಕು ಎಂದವರು ಸೂಚಿಸಿದ್ದಾರೆ. ಅಲೋಪತಿ ಆಸ್ಪತ್ರೆಗಳು ಆಕಾಶ ನೀಲಿ ಬಣ್ಣ, ಆಯುರ್ವೇದ ಆಸ್ಪತ್ರೆಗಳು ತಿಳಿ ಹಸಿರು ಬಣ್ಣದ ಫಲಕಗಳನ್ನು ಅಳವಡಿಸಬೇಕು. ಜಿಲ್ಲೆಯಲ್ಲಿ ಇಲ್ಲಿಯವರೆಗೆ ನೋಂದಣಿಯಾಗದೆ ಇರುವ ಸಂಸ್ಥೆಗಳು ಒಂದು ವಾರದ ಒಳಗೆ ನೋಂದಣಿ ಹಾಗೂ ನವೀಕರಣ ಮಾಡಿಸತಕ್ಕದ್ದು, ತಪ್ಪಿದಲ್ಲಿ ಕಾನೂನು ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದ್ದಾರೆ.

<><*<><>*><>

ಕರ್ನಾಟಕ ಲೋಕಾಯುಕ್ತ ಹೊಸಪೇಟೆ ಘಟಕದಿಂದ ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರು ಹಾಗೂ ಪೊಲೀಸ್ ನಿರೀಕ್ಷಕರ ನೇತೃತ್ವದಲ್ಲಿ ಜೂನ್ ತಿಂಗಳಲ್ಲಿ ವಿಜಯನಗರ ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆಗಳು ನಡೆಯಲಿವೆ. ನಾಳೆ ಕೊಟ್ಟೂರು ತಾಲೂಕು ಕಚೇರಿ ಸಭಾಂಗಣದಲ್ಲಿ, ಇದೇ ೨೦ರಂದು  ಕೂಡ್ಲಿಗಿ ತಾಲೂಕು ಕಚೇರಿ ಸಭಾಂಗಣದಲ್ಲಿ, ಇದೇ ೨೫ರಂದು ಹರಪನಹಳ್ಳಿ ತಾಲೂಕು ಕಚೇರಿ ಸಭಾಂಗಣದಲ್ಲಿ ಸಭೆಗಳು ನಡೆಯಲಿದ್ದು, ಸಾರ್ವಜನಿಕರು ತಮ್ಮ ಕುಂದು ಕೊರತೆಗಳು, ಅಹವಾಲುಗಳನ್ನು  ಸಲ್ಲಿಸಬಹುದು ಎಂದು ಕರ್ನಾಟಕ ಲೋಕಾಯುಕ್ತ ಹೊಸಪೇಟೆ ಘಟಕದ ಪೊಲೀಸ್ ಉಪ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<><>*><>

ಮುಂಬರುವ ದಿನಗಳಲ್ಲಿ ಪ್ರವಾಹ ಮತ್ತು ಅತಿವೃಷ್ಟಿ ಸಂದರ್ಭದಲ್ಲಿ ಕೈಗೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಅಧಿಕಾರಿಗಳು ಪರಸ್ಪರ ಸಮನ್ವಯತೆಯಿಂದ ಕಾರ್ಯನಿರ್ವಹಿಸಲು ಸನ್ನದ್ಧರಾಗಿರುವಂತೆ ಯಾದಗಿರಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮನೋಜ್ ಜೈನ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಯಾದಗಿರಿ ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಇಂದು ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಮುಂಬರುವ ದಿನಗಳಲ್ಲಿ ಪ್ರವಾಹ ಮತ್ತು ಅತಿವೃಷ್ಟಿ ಗಳಂತಹ ಪರಿಸ್ಥಿತಿಗಳನ್ನು ಎದುರಿಸಲು ಅಧಿಕಾರಿಗಳು ಸರ್ವರೀತಿಯಿಂದ ಸನ್ನದ್ಧರಾಗಿರಬೇಕು ಎಂದು ಹೇಳಿದರು.  ನದಿ, ಹಳ್ಳಗಳು ಹಾಗೂ ತಗ್ಗು ಪ್ರದೇಶಗಳ ವ್ಯಾಪ್ತಿಯಲ್ಲಿರುವ ಗ್ರಾಮಗಳು, ರಸ್ತೆ ಹಾಗೂ ರೈಲ್ವೆ ಕ್ರಾಸಿಂಗ್‌ಗಳನ್ನು ಈಗಿನಿಂದಲೇ ಗುರುತಿಸಿ ಇಟ್ಟುಕೊಳ್ಳಬೇಕು. ನೋಡಲ್ ಅಧಿಕಾರಿಗಳು ಮತ್ತು ಸಂಬಂಧಿಸಿದ ಅಧಿಕಾರಿಗಳು ಪೊಲೀಸ್ ಇಲಾಖೆಯೊಂದಿಗೆ ನಿರಂತರ ಸಂಪರ್ಕ ಇಟ್ಟುಕೊಳ್ಳುವ ಮೂಲಕ ಸಮನ್ವಯತೆಯಿಂದ ಕಾರ್ಯನಿರ್ವಹಿಸಲು ಮುಂದಿನ ದಿನಗಳಲ್ಲಿ ಸನ್ನದ್ಧರಾಗಿರುವಂತೆ ಸೂಚನೆ ನೀಡಿದರು.

<><*<><>*><>

ಚಿತ್ರದುರ್ಗ ಜಿಲ್ಲೆಯಲ್ಲಿ ಪ್ರಸ್ತುತ ಜಿಲ್ಲೆಯಾದ್ಯಂತ ಕೃಷಿ ಚಟುವಟಿಕೆಗಳು ಅತ್ಯಂತ ಬಿರುಸಿನಿಂದ ನಡೆಯುತ್ತಿದ್ದು, ಜಿಲ್ಲೆಯಲ್ಲಿ ೨೫ ಸಾವಿರದ ೪೫ ಮೆಟ್ರಿಕ್ ಟನ್ ರಸಗೊಬ್ಬರ ಹಾಗೂ ೩೫ ಸಾವಿರ ಕ್ವಿಂಟಲ್ ಬಿತ್ತನೆ ಬೀಜದ ದಾಸ್ತಾನು ಮಾಡಲಾಗಿದೆ.  ಬಿತ್ತನೆ ಬೀಜ ಹಾಗೂ ರಸಗೊಬ್ಬರ ವಿತರಣೆ ಕಾರ್ಯವು ಸುಗಮವಾಗಿ ನಡೆಯುತ್ತಿದೆ ಎಂದು ಜಂಟಿ ಕೃಷಿ ನಿರ್ದೇಶಕ ಬಿ.ಮಂಜುನಾಥ ತಿಳಿಸಿದ್ದಾರೆ.

<><*<><>*><>

ಚಿಕ್ಕಮಗಳೂರು ಜಿಲ್ಲೆಯಲ್ಲಿ ಇತ್ತೀಚೆಗೆ ಡೆಂಘಿ ಪ್ರಕರಣಗಳು ಹೆಚ್ಚಾಗಿದ್ದು ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಸೂಕ್ತ ಚಿಕಿತ್ಸೆ ಹಾಗೂ ಔಷದೋಪಚಾರ ನೀಡುವಂತೆ ಸಂಬಂಧಪಟ್ಟ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಉಡುಪಿ-ಚಿಕ್ಕಮಗಳೂರು ಸಂಸದ ಕೋಟಾ ಕೋಟಾ ಶ್ರೀನಿವಾಸ್ ಪೂಜಾರಿ ತಿಳಿಸಿದ್ದಾರೆ. ಚಿಕ್ಕಮಗಳೂರು ನಗರದ ಸರ್ಕಾರಿ ಆಸ್ಪತ್ರೆಗೆ ಇಂದು ಭೇಟಿ ನೀಡಿ

ಆಸ್ಪತ್ರೆಗೆ ಇಂದು ಭೇಟಿ ನೀಡಿ ಪರಿಶಿಲನೆ ನಡೆಸಿದ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಡೆಂಘಿ ಮಾತನಾಡಿದ ಅವರು, ಡೆಂಘಿ ಜ್ವರದಿಂದ ೩೦೦ ಕ್ಕೂ ಅಧಿಕ ರೋಗಿಗಳು ಆಸ್ಪತ್ರೆಯಲ್ಲಿ ದಾಖಲಾಗಿದ್ದಾರೆ. ದಾಖಲಾಗಿದ್ದಾರೆ. ಎಲ್ಲಾ ರೋಗಿಗಳಿಗೆ ಸೂಕ್ತವಾಗಿ ಸ್ಪಂದಿಸಿ ಚಿಕಿತ್ಸೆ ನೀಡುವಂತೆ ಜಿಲ್ಲಾ ಜಿಲ್ಲಾ ವೈದ್ಯಾಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

**<><*<><>*><>**

ಸಂಕ್ಷಿಪ್ತ ಸುದ್ದಿಗಳು

೧. ಕೇಂದ್ರ ಕೃಷಿ ಹಾಗೂ ರೈತ ಕ್ಷೇಮಾಭಿವೃದ್ಧಿ ಸಚಿವಾಲಯದ ಆದೇಶದಂತೆ ತುಮಕೂರು ಜಿಲ್ಲೆಯಲ್ಲಿ ಬೆಂಬಲಬೆಲೆ ಯೋಜನೆಯಡಿ ಉಂಡೆ ಕೊಬ್ಬರಿ ಖರೀದಿ ಅವಧಿಯನ್ನು ಇದೇ ೨೯ರವರೆಗೆ ವಿಸ್ತರಿಸಲಾಗಿದೆ ಎಂದು ಕೃಷಿ ಉತ್ಪನ್ನ ಮಾರುಕಟ್ಟೆ ಉಪನಿರ್ದೇಶಕ ರಾಜಣ್ಣ ತಿಳಿಸಿದ್ದಾರೆ.

೨. ಇದೇ ೧೪ ರಿಂದ ೨೨ ರವರೆಗೆ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಪರೀಕ್ಷೆ-೨ ನಡೆಯಲಿದ್ದು, ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳು ಪರೀಕ್ಷಾ ದಿನಗಳಲ್ಲಿ ಬಸ್‌ನಲ್ಲಿ ಉಚಿತವಾಗಿ ಪ್ರಯಾಣಿಸಲು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಅವಕಾಶ ಕಲ್ಪಿಸಿದೆ.

೩. ಉತ್ತರ ಕನ್ನಡ ಜಿಲ್ಲೆಯ ಸರ್ಕಾರಿ ಬಾಲಕಿಯರ ಬಾಲಮಂದಿರ ಮತ್ತು ಸರ್ಕಾರಿ ಬಾಲಕರ ಬಾಲಮಂದಿರದಲ್ಲಿ ಇರುವ ಮಕ್ಕಳಿಗೆ ದೈಹಿಕ ಯೋಗ, ಸಂಗೀತ ಕ್ರಾಫ್ಟ್, ಇಂಗ್ಲೀಷ್, ಗಣಿತ ಮತ್ತು ವಿಜ್ಞಾನ ಪಾಠ ಮಾಡಲು ಅರೆಕಾಲಿಕ ಶಿಕ್ಷಕರು, ಬೋಧಕರ ಹುದ್ದೆಗೆ ಗೌರವಧನದ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

೪. ಇದೇ ೨೧ ರಂದು ನಡೆಯಲಿರುವ ೧೦ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಹಿನ್ನಲೆಯಲ್ಲಿ ದಾವಣಗೆರೆ ಜಿಲ್ಲಾದ್ಯಂತ ಶಾಲಾ-ಕಾಲೇಜು ಮಕ್ಕಳಿಗೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಆಯುಷ್ ಅಧಿಕಾರಿ ಡಾ.ಯೋಗೇಂದ್ರ ಕುಮಾರ್ ತಿಳಿಸಿದ್ದಾರೆ.

೫. ವಿಜಯನಗರದ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ ೨೦೨೪-೨೫ ನೇ ಸಾಲಿನಿಂದ ಮೀಸಲಾತಿಯಡಿ ಪ್ರವೇಶ ಪಡೆಯುವ ಪೌರಕಾರ್ಮಿಕರ ಮಕ್ಕಳು ಮತ್ತು ಅಂಥ ವಿದ್ಯಾರ್ಥಿಗಳಿಗೆ ಸಂಪೂರ್ಣ ಶುಲ್ಕ ವಿನಾಯಿತಿ ಘೋಷಣೆ ಮಾಡಿದೆ.

೬. ಉತ್ತರ ಕನ್ನಡ ಜಿಲ್ಲೆಯ ಸರ್ಕಾರಿ ಬಾಲಕಿಯರ ಬಾಲಮಂದಿರ ಮತ್ತು ಸರ್ಕಾರಿ ಬಾಲಕರ ಬಾಲಮಂದಿರದಲ್ಲಿ ಇರುವ ಮಕ್ಕಳಿಗೆ ದೈಹಿಕ ಯೋಗ, ಸಂಗೀತ ಪಾಠ ಮಾಡಲು ಅರೆಕಾಲಿಕ ಶಿಕ್ಷಕರು, ಬೋಧಕರ ಹುದ್ದೆಗೆ ಗೌರವಧನದ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ ೦೮೩೮೨-೨೨೦೧೮೨ ಗೆ ಸಂಪರ್ಕಿಸಬಹುದಾಗಿದೆ ಎಂದು ಉತ್ತರಕನ್ನಡ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**<><*<>** ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೬.೩೫ ಕ್ಕೆ **<>*><>**